ಕರ್ನಾಟಕ ಸರ್ಕಾರ

ವಾಣಿಜ್ಯ ತೆರಿಗೆಗಳ ಇಲಾಖೆ

Office of the Commissioner of Commercial Taxes, Bangalore-9.
12 JUL 2017
G.L. No: 2581
D.C.C.T. (e-Governance)

ಸಂ.ವಾತೆಅಆ/ಜಾರಿ/ದವ/ವಾವಿ/ಸಿಆರ್–1/2017–18
T.no. 748/17-18.

ವಾಣಿಜ್ಯ ತೆರಿಗೆ ಅಪರ ಆಯುಕ್ತರವರ ಕಛೇರಿ,
(ಜಾರಿ)–ದಕ್ಷಿಣ ವಲಯ, ವಾಣಿಜ್ಯ ತೆರಿಗೆ
ಕಾರ್ಯಾಲಯ–2, ಬಿ ಬ್ಲಾಕ್,ಕೋರಮಂಗಲ,
ಬೆಂಗಳೂರು–560047,ದಿನಾಂಕ:07–07–2017

## ಪ್ರಕಟಣೆ

ವಿಷಯ: 2017–18ನೇ ಸಾಲಿಗೆ ವಾಣಿಜ್ಯ ತೆರಿಗೆ ಅಪರ ಆಯುಕ್ತರ ಕಛೇರಿ(ಜಾರಿ) ದ.ವ., ಬೆಂಗಳೂರು, ಈ ಕಛೇರಿಗೆ ಸಾಮಾನ್ಯ ಟೆಂಡರ್ ಪ್ರಕ್ರಿಯೆ ಮುಖೇನ ಖಾಸಗಿ ವಾಹನಗಳನ್ನು ಬಾಡಿಗೆಗೆ ಪಡೆದುಕೊಳ್ಳುವ ಬಗ್ಗೆ.

ಉಲ್ಲೇಖ: ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರವರ ಸುತ್ತೋಲೆ ಸಂ.ವಿಹೆಚ್‌ಟಿ/ಸಿಆರ್–11/2017–18, ದಿ.04–07–2017.

* * *

ವಾಣಿಜ್ಯ ತೆರಿಗೆ ಅಪರ ಆಯುಕ್ತರು(ಜಾರಿ)–ದಕ್ಷಿಣ ವಲಯ, ಬೆಂಗಳೂರು ಇವರ ಕಛೇರಿಯ ಉಪಯೋಗಕ್ಕಾಗಿ ಮೂವತ್ತೈದು ಖಾಸಗಿ ವಾಹನಗಳನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆಯಲು ಉಲ್ಲೇಖದಲ್ಲಿ ತಿಳಿಸಿರುವ ಮಾನ್ಯ ಆಯುಕ್ತರ ಪತ್ರದಲ್ಲಿ ಅನುಮತಿಸಿರುವುದರಿಂದ, ಅಧಿಕೃತ ಟ್ರಾವಲ್ ಏಜನ್ಸಿ/ಸಂಸ್ಥೆ, ಮಾಲೀಕರೇ ಚಾಲಕರಾಗಿರುವವರಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಆಸಕ್ತ ಒಬ್ಬ ವಾಹನ ಮಾಲೀಕ/ಚಾಲಕರು ಒಂದು ವಾಹನ ಸೇವೆಗೆ ಮಾತ್ರ ಅರ್ಜಿಯನ್ನು ಸಲ್ಲಿಸುವುದು. ಸರ್ಕಾರದ ಆದೇಶ ಸಂ.ಸಿಆಸುಇ 139 ಶಿವಾನಿ 2004 ದಿ.12–09–2006ರಲ್ಲಿ ತಿಳಿಸಿರುವ ನಿಯಮಗಳನ್ವಯ ಖಾಸಗಿ ವಾಹನಗಳ ಸೇವೆಯನ್ನು ಪಡೆಯಲಾಗುವುದು.

1. ಮೇಲ್ಕಂಡ ಆದೇಶದ ಅನ್ವಯ ವಾಹನಗಳ ಬಾಡಿಗೆ ಗರಿಷ್ಠ ತಿಂಗಳಿಗೆ ಮೊತ್ತ ರೂ.25,000–00 ನೀಡಲಾಗುವುದು

2. ವಾಹನದ ಮಾದರಿಯು 2013 ಮತ್ತು ನಂತರದಾಗಿರತಕ್ಕದ್ದು, ಪ್ರತಿ ವಾಹನದ ಗುಣಮಟ್ಟವನ್ನು ಹಾಗೂ ಚಾಲನ ಕೌಶಲ್ಯವನ್ನು ಪರಿಶೀಲಿಸಿ ನಂತರವೇ ವಾಹನಗಳನ್ನು ತೆಗೆದುಕೊಳ್ಳಲಾಗುವುದು.

3, ಗುತ್ತಿಗೆಯ ಅವಧಿ ದಿನಾಂಕ 01–08–2017ರಿಂದ 31–07–2018ರವರೆಗೆ

ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ 26.07.2017 ಸಂಜೆ 5.00 ಘಂಟೆಯವರೆಗೆ. ಆ ನಂತರ ಸಲ್ಲಿಸಿದ ಅರ್ಜಿಗಳನ್ನು ಪುರಸ್ಕರಿಸಲಾಗುವುದಿಲ್ಲ.

ಟೆಂಡರ್ ತೆರೆಯುವ ದಿನಾಂಕ :27.07.2017 ಬೆಳಗ್ಗೆ 11.00 ಘಂಟೆ

ಅರ್ಹಗೊಂಡ ಟ್ರಾವಲ್ ಏಜನ್ಸಿ/ಸಂಸ್ಥೆ, ಮಾಲೀಕರೇ ಚಾಲಕರಾಗಿರುವ ವಾಹನ ಮಾಲೀಕ/ಚಾಲಕರ ವಿವರವನ್ನು ಇಲಾಖೆಯ ಸೂಚನಾ ಫಲಕ ಹಾಗೂ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು/ವಿವರಗಳು:

| | |
|---|---|
| 1 | ಅರ್ಜಿದಾರರ ಹೆಸರು,ವಿಳಾಸ ಹಾಗೂ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು-2 |
| 2 | ಏಜನ್ಸಿ/ಸಂಸ್ಥೆಯವರಿಗೆ:<br>ಏಜನ್ಸಿಯ/ಸಂಸ್ಥೆಯ ಖಾಯಂ ವಿಳಾಸ, ದೂರವಾಣಿ ಸಂಖ್ಯೆ ಮತ್ತು ವಾಹನಗಳ ಸೇವೆಯ ಅನುಭವದ ಬಗ್ಗೆ ಖಾತ್ರಿ ಪತ್ರ<br>ಮಾಲೀಕರೇ ಚಾಲಕರಾಗಿರುವವರಿಗೆ:<br>ವಿಳಾಸದ ದಾಖಲೆ (ಮತದಾರರ ಗುರುತಿನ ಚೀಟಿ/ರೇಷನ್ ಕಾರ್ಡ್/ಆಧಾರ್ ಕಾರ್ಡ್/ಪಾಸ್ ಪೋರ್ಟ್ ಅಥವಾ ಇತರೆ ಭಾವಚಿತ್ರ ಹೊಂದಿರುವ ಗುರುತಿನ ಚೀಟಿ ಹಾಗೂ ಖಾಯಂ ವಿಳಾಸದ ದಾಖಲೆ, ಬ್ಯಾಂಕ್ ಖಾತೆಯ ವಿವರಗಳು/ಚೆಕ್ಕಿನ ಪ್ರತಿ. |
| 3 | ವಾಹನದ ನೊಂದಣಿ ಪುಸ್ತಕದ ಪ್ರತಿ – ಪ್ರಮಾಣ ಪತ್ರ |
| 4 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನದ ವಿಮಾ ಪಾಲಿಸಿಯ ಪ್ರತಿ |
| 5 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನ ಚಾಲನಾ ಪರವಾನಗಿ ಪ್ರತಿ |
| 6 | ರೋಡ್ ತೆರಿಗೆ ಪಾವತಿಸಿರುವ ವಿವರ – |
| 7 | ಮಾಲೀಕರಿಗೆ ಸಂಬಂಧಿಸಿದಂತೆ ಡ್ರೈವಿಂಗ್ ಲೈಸನ್ಸ್<br>ಚಾಲಕರ ದೈಹಿಕ ಸಾಮರ್ಥ ಪ್ರಮಾಣ ಪತ್ರ |
| 8 | ಪಾನ್ ಕಾರ್ಡ್ ಮತ್ತು ಆಧಾರ್ ಕಾರ್ಡ್ ನಮೂದಿಸತಕ್ಕದ್ದು. |
| 9 | ಮೇಲ್ಕಂಡ ವಿವರಗಳು ಹಾಗೂ ಎಲ್ಲಾ ದಾಖಲಾತಿಗಳ ಪ್ರತಿಗಳನ್ನು ಸೀಲು ಮಾಡಿದ ಲಕೋಟೆಯಲ್ಲಿಟ್ಟು, ಲಕೋಟೆಯ ಮೇಲೆ ದಪ್ಪ ಅಕ್ಷರದಲ್ಲಿ ಖಾಸಗಿ ವಾಹನ ಚಾಲಕರ/ಮಾಲೀಕರ/ಟ್ರಾವಲ್ ಏಜನ್ಸಿ/ಸಂಸ್ಥೆಯವರ ಹೊರಗುತ್ತಿಗೆ ಸೇವೆ ಸಲ್ಲಿಸಲು ಅರ್ಜಿ ಎಂದು ನಮೂದಿಸುವುದು |
| 10 | ಅಪೂರ್ಣ ವಿವರಗಳು ಹಾಗೂ ಮೇಲ್ಕಂಡ ದಾಖಲಾತಿಗಳನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು |
| 11 | ಅರ್ಜಿಗಳನ್ನು ಖುದ್ದಾಗಿ ವಾಣಿಜ್ಯ ತೆರಿಗೆ ಅಪರ ಆಯುಕ್ತರವರ ಕಛೇರಿ(ಜಾರಿ)-ದಕ್ಷಿಣ ವಲಯ, ಕೊಠಡಿ ಸಂಖ್ಯೆ-308, ಮೂರನೇ ಮಹಡಿ, ಬಿ ಬ್ಲಾಕ್, ವಾಣಿಜ್ಯ ತೆರಿಗೆ ಕಾರ್ಯಾಲಯ-2, ಕೋರಮಂಗಲ, ಬೆಂಗಳೂರು ಇವರ ಶಾಖೆಯಲ್ಲಿ ಸಲ್ಲಿಸುವುದು ಹಾಗೂ ಅರ್ಜಿಗಳ ಸ್ವೀಕೃತಿ ಅನುಸಾರವಾಗಿ ಕ್ರಮ ಸಂಖ್ಯೆ ನೀಡಲಾಗುವುದು. |
| 12 | ಅರ್ಜಿಗಳನ್ನು ಸಲ್ಲಿಸಿರುವುದಕ್ಕೆ ಸ್ವೀಕೃತಿ ಪಡೆಯುವುದು ಹಾಗೂ ಕಾರ್ಯ ನಿರ್ವಹಣೆಯಲ್ಲಿ ಪಾಲಿಸಬೇಕಾದ ನಿಯಮಗಳು/ಷರತ್ತುಗಳ ವಿವರಗಳ ಪಟ್ಟಿ ಅನ್ವಯ ಖುಡ್ಡಾಯವಾಗಿ |